# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ ಪಂಚಾಯತಿ ಸಶಕ್ತೀಕರಣ ಅಭಿಯಾನ(ಪಿ.ಎಸ್.ಎ)/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆ (ಆರ್.ಜಿ.ಎಸ್.ಎ)ಯಡಿ ಬೀದರ್ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಬಾಕಿ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3), ದಿನಾಂಕ:25-07-2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012, ದಿನಾಂಕ:26-02-2014.
3. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3), ದಿನಾಂಕ:18-07-2014.
4. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:27-11-2014.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ದಿನಾಂಕ:04-09-2015.
6. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 62 ಜಿಪಸ 2016, ದಿನಾಂಕ:18-05-2016.
7. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 62 ಜಿಪಸ 2015, ದಿನಾಂಕ:05-06-2017.
8. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 28 ಜಿಪಸ 2019, ದಿನಾಂಕ:05-03-2019.
9. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಗ್ರಾಅಪ 28 ಜಿಪಸ 2019, ದಿನಾಂಕ:22-08-2019.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ಜರುಗಿದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ನಡವಳಿ ದಿನಾಂಕ:19-09-2019.
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ಇವರ ಪತ್ರ ದಿನಾಂಕ:04-03-2020.

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಎಂಬ ನೂತನ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ. 2018-19ನೇ ಸಾಲಿನಿಂದ ಸದರಿ ಯೋಜನೆಯನ್ನು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಎಂದು ಮರು ನಾಮಕರಣ ಮಾಡಲಾಗಿದೆ.

ಪಂಚಾಯತಿ ರಾಜ್ ವ್ಯವಸ್ಥೆಯು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ, ವಿಚಾರಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ಪಂಚಾಯತಿ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ)"ಯಡಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ಮೇಲೆ ಓದಲಾದ ಉಲ್ಲೇಖ(2), (3), (4), (5), (6) & (7)ರ ಆದೇಶಗಳ ಪ್ರಕಾರ ಈಗಾಗಲೇ ರಾಜ್ಯದ ಜಿಲ್ಲಾ ಪಂಚಾಯತಿಗಳಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಸ್ಥಾಪನೆ ಉದ್ದೇಶಕ್ಕಾಗಿ ಕಳೆದ ಸಾಲುಗಳಲ್ಲಿ ಪ್ರತಿ ಜಿಲ್ಲಾ ಪಂಚಾಯತಿಗೆ ರೂ.150.00ಲಕ್ಷಗಳಂತೆ ಒಟ್ಟಾರೆ ರೂ.45.00ಕೋಟಿಗಳನ್ನು ಕರ್ನಾಟಕ ಸರ್ಕಾರ ಸ್ವಾಮ್ಯದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ಕ್ಕೆ ಬಿಡುಗಡೆ ಮಾಡಲಾಗಿದೆ.

ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ಪಂಚಾಯತಿ ಸಶಕ್ತೀಕರಣ ಅಭಿಯಾನ(ಪಿ.ಎಸ್.ಎ)/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆ(ಆರ್.ಜಿ.ಎಸ್.ಎ)ಯಡಿ ಬೀದರ್ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡ ಕಾಮಗಾರಿಯು ಪೂರ್ಣ ಪ್ರಮಾಣದಲ್ಲಿ ಮುಗಿದಿದ್ದು, ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ವಶಕ್ಕೆ ಹಸ್ತಾಂತರಿಸದಿರುವುದರಿಂದ ಬೀದರ್ ಜಿಲ್ಲಾ ಪಂಚಾಯತ್

ಸಂಪನ್ಮೂಲ ಕೇಂದ್ರ ಕಟ್ಟಡಕ್ಕೆ ಅಗತ್ಯ ಪೀಠೋಪಕರಣಗಳು ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.25.00ಲಕ್ಷಗಳನ್ನು ಈಗಾಗಲೇ ಮೇಲೆ ಓದಲಾದ(8)ರ ಆದೇಶ ಹಾಗೂ (9)ರ ತಿದ್ದುಪಡಿ ಆದೇಶದನ್ವಯ ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ(11)ರ ಪತ್ರದಲ್ಲಿ ತಿಳಿಸಿರುವಂತೆ ಬೀದರ್ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಜಿಲ್ಲಾ ಪಂಚಾಯತಿಗೆ ಹಸ್ತಾಂತರಿಸಿರುವುದರಿಂದ ಮೇಲೆ ಓದಲಾದ(10)ರ ಸಭಾ ನಡವಳಿಯ ತೀರ್ಮಾನದಂತೆ ಹೆಚ್ಚುವರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಬಾಕಿ ಉಳಿದ ರೂ.25.00ಲಕ್ಷಗಳನ್ನು ಬಿಡುಗಡೆಗೊಳಿಸಬೇಕಾಗಿರುತ್ತದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 138 ಜಿಪಸ 2017(ಪಿ-1), ಬೆಂಗಳೂರು, ದಿನಾಂಕ:07-03-2020.**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ ಪಂಚಾಯತಿ ಸಶಕ್ತೀಕರಣ ಅಭಿಯಾನ(ಪಿ.ಎಸ್.ಎ)/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆ(ಆರ್.ಜಿ.ಎಸ್.ಎ)ಯಡಿ ಬೀದರ್ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡ ಕಾಮಗಾರಿಯು ಪೂರ್ಣ ಪ್ರಮಾಣದಲ್ಲಿ ಮುಗಿದಿದ್ದು, ಬೀದರ್ ಜಿಲ್ಲಾ ಪಂಚಾಯತಿಗೆ ಹಸ್ತಾಂತರಿಸಿರುವುದರಿಂದ, ಬೀದರ್ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಕ್ಕೆ ಅಗತ್ಯ ಪೀಠೋಪಕರಣಗಳು ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರಾಜ್ಯದ ಪಾಲಿನ ಅನುದಾನದಿಂದ ಬಿಡುಗಡೆಗೊಳಿಸಲು ಆದೇಶಿದೆ. ಈ ಹಿನ್ನೆಲೆಯಲ್ಲಿ, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆ"ಯ ಹೆಸರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ಬ್ಯಾಂಕ್ ಆಫ್ ಬರೋಡಾ, ಇಂದಿರಾನಗರ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 052110026480ಯಿಂದ ಬೀದರ್ ಜಿಲ್ಲಾ ಪಂಚಾಯತಿಯು ಬೀದರ್ ಶಾಖೆಯಲ್ಲಿ ತೆರೆಯಲಾಗಿರುವ ಕೆನರಾ ಬ್ಯಾಂಕಿನ ಖಾತೆ ಸಂಖ್ಯೆ: 0448101051871, IFSC CODE: CNRB0000448ಗೆ ಬಾಕಿ ಉಳಿದ ರೂ.25.00ಲಕ್ಷಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳು ಆಯಾ ಜಿಲ್ಲಾ ಪಂಚಾಯತಿಗಳು ಕಡ್ಡಾಯವಾಗಿ ವಶಕ್ಕೆ ಪಡೆದುಕೊಂಡ ನಂತರವೇ ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಆದೇಶದನ್ವಯ ಅನುದಾನವನ್ನು ಬಳಸಿಕೊಳ್ಳುವುದು.
2. ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ಅಗತ್ಯ ಪೀಠೋಪಕರಣಗಳೊಂದಿಗೆ ಮೂಲಭೂತ ಸೌಲಭ್ಯಗಳನ್ನು ಅನುಷ್ಠಾನ ಏಜೆನ್ಸಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಮುಖಾಂತರ ಕೆ.ಟಿ.ಪಿ.ಪಿ. ನಿಯಮಗಳಂತೆ ಅನುಷ್ಠಾನಗೊಳಿಸತಕ್ಕದ್ದು.
3. ಈ ಆದೇಶದಲ್ಲಿ ತಿಳಿಸಿರುವ ಮೂಲಭೂತ ಸೌಲಭ್ಯಗಳನ್ನು ಜಿಲ್ಲಾ ಪಂಚಾಯತ್‌ನ ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
4. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999/2000ರಲ್ಲಿ ಸೂಚಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು.
5. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸತಕ್ಕದ್ದು.
6. ಅಗತ್ಯ ಪೀಠೋಪಕರಣಗಳೊಂದಿಗೆ ಮೂಲಭೂತ ಸೌಲಭ್ಯಗಳನ್ನು ಕಾಲಮಿತಿಯಲ್ಲಿ ನಿರ್ಮಿಸುವುದು/ ಒದಗಿಸುವುದು.
7. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಅಗತ್ಯ ಪೀಠೋಪಕರಣಗಳೊಂದಿಗೆ ಮೂಲಭೂತ ಸೌಲಭ್ಯಗಳನ್ನು ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವಾಗ ಹಾಗೂ ಮುಕ್ತಾಯದ ತರುವಾಯ ಕಟ್ಟಡದ ಛಾಯಾಚಿತ್ರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸುವುದು.
8. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ಮೂಲಭೂತ ಸೌಲಭ್ಯಗಳ ಕಾಮಗಾರಿಯನ್ನು ಎಂ.ಜಿ.ಎನ್.ಆರ್.ಇ.ಜಿ.ಎಸ್ ಯೋಜನೆಯಡಿಯ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿವೀಕ್ಷಣೆಯನ್ನು ಮಾಡಿಸಿ, ಸರ್ಕಾರಕ್ಕೆ ಕಾಲಕಾಲಕ್ಕೆ ವರದಿ ಸಲ್ಲಿಸಬೇಕು.
9. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಆಗಮಿಸುವರು.

10. ಬಿಡುಗಡೆಗೊಳಿಸಲಾದ ಮೊತ್ತಕ್ಕೆ ಸನ್ನದು ಲೆಕ್ಕಿಗರಿಂದ ವಾರ್ಷಿಕವಾಗಿ ಲೆಕ್ಕ ಪರಿಶೋಧನೆ ಮಾಡಿಸಿ ಭಾರತ ಸರ್ಕಾರದ ಜಿ.ಎಫ್.ಆರ್-12-ಸಿ ನಮೂನೆಯಲ್ಲಿ ಉಪಯೋಗಿತಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸುವುದು.
11. ಸಂಪೂರ್ಣವಾಗಿ ನಿರ್ಮಾಣಗೊಂಡಿರುವ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಕೆ.ಆರ್.ಐ.ಡಿ.ಎಲ್ ಸಂಸ್ಥೆಯಿಂದ ಜಿಲ್ಲಾ ಪಂಚಾಯತಿಗಳಿಗೆ ಹಸ್ತಾಂತರಿಸಿಕೊಳ್ಳಲು ಕೂಡಲೇ ಕ್ರಮವಹಿಸುವುದು(ಈಗಾಗಲೇ ಹಸ್ತಾಂತರಿಸಿರುವ ಕಟ್ಟಡಗಳನ್ನು ಹೊರತುಪಡಿಸಿ).
12. ಮುಖ್ಯ ಅಭಿಯಂತರರು, ಕೆ.ಆರ್.ಐ.ಡಿ.ಎಲ್ ರವರು ಸಲ್ಲಿಸಿದ ಅಂದಾಜು ಪಟ್ಟಿಯ ಪ್ರತಿಯನ್ನು ಮಾದರಿ ವಿನ್ಯಾಸವಾಗಿ ನೀಡಿದ್ದು, ಅದರ ಆಧಾರದ ಮೇಲೆ ಕ್ರಮವಹಿಸುವುದು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ: 03-04-2019ರಲ್ಲಿ ತಿಳಿಸಿದಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ: 04-07-2019ರನ್ವಯ ಆಯಾ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತಗೊಳಿಸಲಾಗಿರುವ ಅಧಿಕಾರದನ್ವಯ ಬಿಡುಗಡೆಗೊಳಿಸಲು ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
07/03/2020
(ಪಿ.ಮಂಜೂರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

07-03-2020

ಗೆ,

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್.
5. ವ್ಯವಸ್ಥಾಪಕರು, ಬ್ಯಾಂಕ್ ಆಫ್ ಬರೋಡಾ, ಇಂದಿರಾ ನಗರ ಶಾಖೆ, ಬೆಂಗಳೂರು.
6. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.